## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:**-ರಾಜ್ಯ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ ಆಯ್ಕೆ ಹಾಗೂ ಇಲಾಖಾವಾರು ಸರ್ವೋತ್ತಮ ಸೇವಾ ಪ್ರಶಸ್ತಿ ಅನುಮೋದನೆ ಸಮಿತಿ ರಚಿಸುವ ಬಗ್ಗೆ.

**ಓದಲಾಗಿದೆ:**-1.ಸರ್ಕಾರದ ಆದೇಶದ ಸಂಖ್ಯೆ:ಸಿಆಸುಇ:105:ಇಆಸು:2011, ದಿನಾಂಕ:20.11.2012.
2.ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ:ಸಿಆಸುಇ:105:ಇಆಸು:2011, ದಿನಾಂಕ:15.04.2013.

**ಪ್ರಸ್ತಾವನೆ:**

ಓದಲಾದ (1) ಹಾಗೂ (2) ರ ಆದೇಶಗಳಲ್ಲಿ ರಾಜ್ಯ ಸರ್ಕಾರದ ಅತ್ಯುನ್ನತ ಸೇವೆಗೈದ/ಸಾಧನೆ ಮಾಡಿರುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ "ಸರ್ವೋತ್ತಮ ಸೇವಾ ಪ್ರಶಸ್ತಿ" ಪ್ರದಾನ ಮಾಡುವ ಯೋಜನೆಯನ್ನು ಜಾರಿಗೆ ತಂದಿದ್ದು, ಜಿಲ್ಲಾವಾರು, ಇಲಾಖಾವಾರು ಮತ್ತು ರಾಜ್ಯ ಪ್ರಶಸ್ತಿ ಎಂದು ಪ್ರದಾನ ಮಾಡುವ ವಿವರಗಳನ್ನು ತಿಳಿಸಲಾಗಿದೆ. ರಾಜ್ಯ ಸರ್ವೋತ್ತಮ ಸೇವಾ ಪ್ರಶಸ್ತಿ ಆಯ್ಕೆ ಸಮಿತಿಯನ್ನು ಕೆಲವು ಬದಲಾವಣೆಗಳೊಂದಿಗೆ ಮಾರ್ಪಡಿಸಿ ರಚಿಸುವುದು ಸೂಕ್ತ ಎಂದು ತೀರ್ಮಾನಿಸಲಾಗಿದೆ. ಅದರಂತೆ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಮತ್ತು ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರನ್ನೊಳಗೊಂಡಂತೆ ಆಯ್ಕೆ ಸಮಿತಿಯನ್ನು ರಚಿಸುವುದು. ಸದರಿ ಸಮಿತಿಯು ರಾಜ್ಯ ಸರ್ವೋತ್ತಮ ಸೇವಾ ಪ್ರಶಸ್ತಿಗೆ ಆಯ್ಕೆ ಮಾಡುವುದು ಹಾಗೂ ಇಲಾಖಾವಾರು ಪ್ರಶಸ್ತಿಗೆ ಇಲಾಖೆಗಳಿಂದ ಆಯ್ಕೆ ಮಾಡಲ್ಪಟ್ಟು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ)ಯ ಅನುಮೋದನೆಗೆ ಸ್ವೀಕೃತವಾಗುವ ನಾಮನಿರ್ದೇಶನಗಳನ್ನು ಅನುಮೋದಿಸುವುದು ನಂತರ ರಾಜ್ಯ ಸರ್ವೋತ್ತಮ ಸೇವಾ ಪ್ರಶಸ್ತಿಗೆ ಆಯ್ಕೆ ಮಾಡಿರುವ ಅಧಿಕಾರಿ ಮತ್ತು ನೌಕರರ ಪಟ್ಟಿಗೆ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅನುಮೋದನೆಯನ್ನು ಪಡೆಯುವುದು ಎಂದು ತೀರ್ಮಾನಿಸಲಾಗಿದೆ.

ಆದುದರಿಂದ, ಈ ಕೆಳಕಂಡಂತೆ ರಾಜ್ಯ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ ಆಯ್ಕೆ ಹಾಗೂ ಇಲಾಖಾವಾರು ಸರ್ವೋತ್ತಮ ಸೇವಾ ಪ್ರಶಸ್ತಿ ಅನುಮೋದನೆ ಸಮಿತಿಯನ್ನು ರಚಿಸಿ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶದ ಸಂಖ್ಯೆ:ಸಿಆಸುಇ 190 ಇಆಸು 2018, ಬೆಂಗಳೂರು, ದಿನಾಂಕ:03.01.2019.**

ರಾಜ್ಯ ಸರ್ಕಾರದ ಅತ್ಯುನ್ನತ ಸೇವೆಗೈದ/ಸಾಧನೆ ಮಾಡಿರುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ರಾಜ್ಯ ಸರ್ವೋತ್ತಮ ಸೇವಾ ಪ್ರಶಸ್ತಿಗೆ ಆಯ್ಕೆ ಮಾಡಲು ಮತ್ತು ಇಲಾಖಾವಾರು ಪ್ರಶಸ್ತಿಗೆ ಇಲಾಖೆಗಳಿಂದ ಆಯ್ಕೆ ಮಾಡಲ್ಪಟ್ಟು ಅನುಮೋದನೆಗೆ ಸ್ವೀಕೃತವಾಗುವ ನಾಮನಿರ್ದೇಶನಗಳನ್ನು ಅನುಮೋದಿಸಲು ಈ ಕೆಳಕಂಡಂತೆ ಸಮಿತಿಯನ್ನು ರಚಿಸಲಾಗಿದೆ.

| | |
|---|---|
| 1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ | -ಅಧ್ಯಕ್ಷರು |
| 2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಸಿ.ಆ.ಸು.ಇ. | -ಸದಸ್ಯರು |
| 3. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ. | -ಸದಸ್ಯರು |
| 4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ, ಸಿ.ಆ.ಸು.ಇ. (ಆ.ಸು). | -ಸದಸ್ಯ ಕಾರ್ಯದರ್ಶಿ |

...2)

ಸಮಿತಿಯು ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 105 ಇಆಸು 2011. ದಿನಾಂಕ:20.11.2012 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ:ಸಿಆಸುಇ 105 ಇಆಸು 2011. ದಿನಾಂಕ:15.04.2013 ರಲ್ಲಿರುವ ಎಲ್ಲಾ ಮಾರ್ಗಸೂಚಿಗಳನ್ನು ಅನುಸರಿಸಿ ರಾಜ್ಯ ಸರ್ವೋತ್ತಮ ಸೇವಾ ಪ್ರಶಸ್ತಿಗೆ ಅಧಿಕಾರಿ ಮತ್ತು ನೌಕರರನ್ನು ಆಯ್ಕೆ ಮಾಡುವುದು ನಂತರ ಆಯ್ಕೆ ಪಟ್ಟಿಗೆ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅನುಮೋದನೆಯನ್ನು ಪಡೆಯುವುದು ಎಂದು ತಿಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

**(ಸುಜಾತ ಹೆಚ್.ಎಸ್.)**
ಸರ್ಕಾರದ ಅಧೀನ ಕಾರ್ಯದರ್ಶಿ.
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ.
(ಆಸು-ತರಬೇತಿ).
ದೂರವಾಣಿ ಸಂಖ್ಯೆ: 080-22032655.

ಇವರಿಗೆ:

1. ಮಹಾಲೇಖಪಾಲರು. (ಲೆಕ್ಕ ಪತ್ರ)/(ಲೆಕ್ಕಪರಿಶೋಧನೆ). ಕರ್ನಾಟಕ. ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು. ವಿಧಾನಸೌಧ. ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು. ವಿಧಾನಸೌಧ. ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ). ಬಹುಮಹಡಿ ಕಟ್ಟಡ. ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿಗಳು. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ. ವಿಧಾನ ಸೌಧ. ಬೆಂಗಳೂರು.
6. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
7. ಅಧ್ಯಕ್ಷರು. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ. ಕಬ್ಬನ್ ಉದ್ಯಾನವನ. ಬೆಂಗಳೂರು.

ಪ್ರತಿ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ. ವಿಧಾನಸೌಧ. ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರವರ ಆಪ್ತ ಕಾರ್ಯದರ್ಶಿ. ವಿಧಾನಸೌಧ. ಬೆಂಗಳೂರು.
3. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.